**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ಕರ್ನಾಟಕ ರಾಜ್ಯದಲ್ಲಿ ಕುಡಿಯುವ ನೀರಿನ ಸರಬರಾಜು ಬಗ್ಗೆ ವಸ್ತು ಸ್ಥಿತಿ ವಿಶ್ಲೇಷಣೆ ಮಾಡುವ ಕುರಿತು.

**ಓದಲಾಗಿದೆ:** ಇನ್ಸ್ಟಿಟ್ಯೂಟ್ ಆಫ್ ಸೋಷಿಯಲ್ ಸೈನ್ಸ್, ನವದೆಹಲಿ ಇವರ ಪ್ರಸ್ತಾವನೆ, ದಿನಾಂಕ 25.03.2017

***

**ಪ್ರಸ್ತಾವನೆ:**

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ನ್ನು ಜಾರಿಗೊಳಿಸುವ ಮೂಲಕ ವಿಕೇಂದ್ರೀಕರಣ ತತ್ವಕ್ಕನುಸಾರವಾಗಿ ರಾಜ್ಯದಲ್ಲಿ ಮೂರು ಹಂತದ ಪಂಚಾಯತ್ ರಾಜ್ ಸಂಸ್ಥೆಗಳಿಗೆ ಅನುದಾನ, ಪ್ರಕಾರ್ಯಗಳು ಹಾಗೂ ಸಿಬ್ಬಂದಿಗಳನ್ನು ಹಸ್ತಾಂತರಿಸಲಾಗಿದೆ. ಆಯಾ ಪ್ರಕಾರ್ಯಗಳನ್ನು ಆಯಾ ಹಂತಗಳಲ್ಲಿಯೇ ಅನುಷ್ಠಾನಗೊಳಿಸಲು ಅನುವಾಗುವಂತೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳ ಎಲ್ಲಾ ಯೋಜನೆಗಳನ್ನು ಗ್ರಾಮ ಪಂಚಾಯತಿಯಿಂದ ಅನುಷ್ಠಾನಗೊಳಿಸಲಾಗಿದ್ದು, ಗ್ರಾಮ ಪಂಚಾಯತಿಗಳ ಸ್ಥಳೀಯ ಸರ್ಕಾರಗಳಂತೆ ಕಾರ್ಯನಿರ್ವಹಿಸುತ್ತಿವೆ.

ಮೇಲೆ ಓದಲಾದ ಪತ್ರದಲ್ಲಿ ಇನ್ಸ್ಟಿಟ್ಯೂಟ್ ಆಫ್ ಸೋಷಿಯಲ್ ಸೈನ್ಸ, ನವದೆಹಲಿ ಇವರು ಕರ್ನಾಟಕ ರಾಜ್ಯದಲ್ಲಿ ಕುಡಿಯುವ ನೀರಿನ ಸರಬರಾಜು ಬಗ್ಗೆ ವಸ್ತು ಸ್ಥಿತಿ ವಿಶ್ಲೇಷಣೆ ಮಾಡಿ ಅಲ್ಲಿನ ಒಳ್ಳೆಯ ಅಂಶಗಳು ಹಾಗೂ ನ್ಯೂನತೆಗಳ ಬಗ್ಗೆ ವರದಿ ಮಾಡುವುದಾಗಿ ರೂ.30.00 ಲಕ್ಷಗಳ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಕರ್ನಾಟಕ ರಾಜ್ಯದಲ್ಲಿ ಕುಡಿಯುವ ನೀರಿನ ಸರಬರಾಜು ಬಗ್ಗೆ ಕುಡಿಯುವ ನೀರು ಶುದ್ಧೀಕರಣ ವ್ಯವಸ್ಥೆ ಸ್ಥಳಿಯ ಸಂಸ್ಥೆಯ ಕಾರ್ಯನಿರ್ವಹಣೆ, ಆರೋಗ್ಯ, ಕರ ವಸೂಲಿ. ಇತರೆ ವಿಷಯಗಳ ಕುರಿತು ವಸ್ತು ಸ್ಥಿತಿ ವಿಶ್ಲೇಷಣೆ ಕೈಗೊಂಡು, ವಿವರವಾದ ಅಧ್ಯಯನ ಮಾಡಿ ವರದಿ ಪಡೆಯುವುದು ಸೂಕ್ತವಾಗಿದೆ.

ಈ ಅಧ್ಯಯನ ಕಾರ್ಯವನ್ನು ಇಲಾಖೆಯ ಅಂಗಸಂಸ್ಥೆಯಾದ ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರ ಮೂಲಕ ಕೈಗೊಳ್ಳಲು ತೀರ್ಮಾನಿಸಿದ್ದು, ಈ ಅಧ್ಯಯನ ಕೈಗೊಳ್ಳಲು ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ವಹಿಸಲು ಸರ್ಕಾರವು ನಿರ್ಧರಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/15/ಗ್ರಾನೀಸ(8)/2017, ಬೆಂಗಳೂರು, ದಿನಾಂಕ 22.04.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ರಾಜ್ಯದಲ್ಲಿ ಗ್ರಾಮೀಣಾಭಿವೃದ್ಧಿಯಲ್ಲಿ ಪಂಚಾಯತ್ ರಾಜ್ ಸಂಸ್ಥೆಗಳ ಪಾತ್ರದ ಬಗ್ಗೆ ಅಧ್ಯಯನ ಕೈಗೊಳ್ಳಲು ಅಬ್ದುಲ್ ನಜೀರ್‌ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರಿಗೆ ರೂ.30.00 ಲಕ್ಷ ಬಿಡುಗಡೆಗೊಳಿಸಲಾಗಿದೆ.

ಈ ಅಧ್ಯಯನ ಕಾರ್ಯವನ್ನು ಅನುಷ್ಠಾನಗೊಳಿಸುವಲ್ಲಿ ಇನ್ಸ್ಟಿಟ್ಯೂಟ್ ಆಫ್ ಸೋಷಿಯಲ್ ಸೈನ್ಸ್, ನವದೆಹಲಿ ಇವರ ಸೇವೆಯನ್ನು ನಿಯಮಾನುಸಾರ ಪಡೆದುಕೊಂಡು ಅಧ್ಯಯನ ಕೈಗೊಳ್ಳಲು ಸೂಚಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ. ಕೃಷ್ಣಪ್ಪ)
ಸರ್ಕಾರದ ಉಪ ಕಾರ್ಯದರ್ಶಿ (ಗ್ರಾನೀಸ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಇವರಿಗೆ:**

1) ಮಹಾಲೇಖಪಾಲರು, ಕರ್ನಾಟಕ ವೃತ್ತ, ಬೆಂಗಳೂರು.
2) ನಿರ್ದೇಶಕರು, ಎ.ಎನ್.ಎಸ್.ಎಸ್.ಐ.ಆರ್.ಡಿ., ಮೈಸೂರು.
3) ಅಧ್ಯಕ್ಷರು, ಇನ್ಸ್ಟಿಟ್ಯೂಟ್ ಆಫ್ ಸೋಷಿಯಲ್ ಸೈನ್ಸ್, ನವದೆಹಲಿ.
4) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತಿಗಳು.
5) ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
6) ಹೆಚ್ಚುವರಿ ಪ್ರತಿ/ಶಾಖಾ ರಕ್ಷಕ ಕಡತ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾ.ಅ. ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ.
2) ಪ್ರಧಾನ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾ.ಅ. & ಪಂ.ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.